**ದಿನಾಂಕ: 11.10.2021 ರಂದು 11-00 ಕ್ಕೆ ಶ್ರೀ ಹೆಚ್. ನಾಗರಾಜಪ್ಪ, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-177 (ಜೆ.ಪಿ.ನಗರ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾರ್ಡ್-177ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| **ಅಧ್ಯಕ್ಷರು** | ನೋಡಲ್ ಅಧಿಕಾರಿ |
| **ಸದಸ್ಯ ಕಾರ್ಯದರ್ಶಿ** | ವಾರ್ಡ್ 177ರ ಸಹಾಯಕ ಅಭಿಯಂತರರು |
| **ಸದಸ್ಯರುಗಳು** | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| **ಸದಸ್ಯರುಗಳು** | ಬಿಡಬ್ಲ್ಯೂಎಸ್ಎಸ್‌ಬಿ ಅಭಿಯಂತರರು |
| **ಸದಸ್ಯರುಗಳು** | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| **ಸದಸ್ಯರುಗಳು** | ತೋಟಗಾರಿಕೆ ಅಧಿಕಾರಿ (Horti. Inspector) |
| **ಸದಸ್ಯರುಗಳು** | ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ |
| **ಸದಸ್ಯರುಗಳು** | ಕಂದಾಯ ಪರಿವೀಕ್ಷಕರು, ವಾರ್ಡ್ 177 |
| **ಸದಸ್ಯರುಗಳು** | ಅರಣ್ಯ ಸಂರಕ್ಷಣಾಧಿಕಾರಿಗಳು |

## :ನಡಾವಳಿಯ ವರದಿ:

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- ಜೆ.ಪಿ.ನಗರ ವ್ಯಾಪ್ತಿಯಲ್ಲಿರುವ ಶೆಡ್‌ಗಳನ್ನು ರಾಗಿಗುಡ್ಡ ಸ್ಲಂನ ಕಡೆಗೆ ಸ್ಥಳಾಂತರಿಸುವಂತೆ ಚರ್ಚಿಸಲಾಯಿತು.
- 14ನೇ ಮುಖ್ಯರಸ್ತೆ, ಪಿಜಿಆರ್ ಸಿಂಧ್ಯಾ ಹೌಸ್‌ಹತ್ತಿರ ಗಾರ್ಬೇಜ್ ಮತ್ತು ಡೆಬ್ರೀಸ್‌ಗಳನ್ನು ತೆರವುಗೊಳಿಸುವಂತೆ ಹಿರಿಯ ಆರೋಗ್ಯಾಧಿಕಾರಿಗಳಿಗೆ ಸೂಚಿಸುವಂತೆ ಕೋರಲಾಯಿತು.
- ಜೆ.ಪಿ.ನಗರ ಸುತ್ತಮತ್ತಲಿನ ಪ್ರದೇಶಗಳಲ್ಲಿನ ಬೀದಿ ದೀಪಗಳನ್ನು ಸರಿಪಡಿಸುವಂತೆ ಸಂಬಂಧಪಟ್ಟ ಇಲಾಖೆಗೆ ಸೂಚಿಸುವಂತೆ ಕೋರಲಾಯಿತು.
- 11ನೇ ಅಡ್ಡರಸ್ತೆಯಲ್ಲಿರುವ ಉದ್ಯಾನವನವನ್ನು ಅಭಿವೃದ್ಧಿಗೊಳಿಸುವಂತೆ ಸಂಬಂಧಪಟ್ಟ ಇಲಾಖೆಗೆ ಸೂಚಿಸುವಂತೆ ಚರ್ಚಿಸಲಾಯಿತು.

***ಪು.ತಿ.ನೋ***

- ಜೆ.ಪಿ.ನಗರ ವ್ಯಾಪ್ತಿಯ ಸ್ಲಂ ಏರಿಯಾಗಳಲ್ಲಿ ಕ್ರಿಮಿನಲ್ ಚಟುವಟಿಕೆಗಳು ನಡೆಯುತ್ತಿರುವುದಾಗಿ ತಿಳಿಸಿರುತ್ತಾರೆ.
- ಎಸ್‌ಡಬ್ಲ್ಯೂಡಿ ಸುತ್ತಮುತ್ತಲಿನ ಕಡೆಗಳಲ್ಲಿ ಸೊಳ್ಳೆ ನಿವಾರಕ ಔಷಧಿಯನ್ನು ಸಿಂಪಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಕೋರಲಾಯಿತು.
- ಹಸಿ ಕಸ ಮತ್ತು ಒಣಕಸ ವಿಂಗಡಣಾ ಘಟಕವನ್ನು ಸ್ಥಾಪಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಕೋರಲಾಯಿತು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 11.00 ಘಂಟೆಗೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಸಕಾಲದಲ್ಲಿ ಹಾಜರಾಗುವಂತೆ ಹಾಗೂ ಈ ಸಭೆಯಲ್ಲಿ ತಿಳಿಸಿರುವ ಸಮಸ್ಯೆಗಳನ್ನು ಬಗೆಹರಿಸಲು ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.
- ಸದಸ್ಯ ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರವರು ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಕಿರಿಯ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

Nagaraj. M
**ಅಧ್ಯಕ್ಷರು**
**ವಾರ್ಡ್ ಸಮಿತಿ, ವಾರ್ಡ್ ನಂ. 177**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**